ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/71/2015-16. ದಿನಾಂಕ:27-06-2016.

| ವಾದಿಗಳು | ಪ್ರತಿವಾದಿಗಳು |
|---|---|
| ಅಗಸರ ರಂಗಮ್ಮ ಗಂಡ ಲೇಟ್ ಅಗಸರ ಕೆಂಚೋಬಹಳ್ಳಿ ಬಸಪ್ಪ<br>ತ್ಯಾವಣಗಿ ಗ್ರಾಮ<br>ಚನ್ನಗಿರಿ ತಾಲೂಕು<br>ದಾವಣಗೆರೆ ಜಿಲ್ಲಾ | ಬೆಳ್ಳಡಿ ಈರಪ್ಪ ತಂದೆ ಲೇಟ್ ಸಂಗಪ್ಪ<br>ಚೌಡಾಪುರ ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಚೌಡಾಪುರ ಗ್ರಾಮದ ಸನಂ 837/1 ವಿಸ್ತೀರ್ಣ 1-53. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಚೌಡಾಪುರ ಗ್ರಾಮದ ಸನಂ 837/1 ವಿಸ್ತೀರ್ಣ 1-53. ಎಕ್ರೆ ಜಮೀನನ್ನು ದಾವಣಗೆರೆ ಜಿಲ್ಲಾ ಚನ್ನಗಿರಿ ತಾಲೂಕು ತ್ಯಾವಣಗಿ ಗ್ರಾಮದ ಅಗಸರ ರಂಗಮ್ಮ ಗಂಡ ಲೇಟ್ ಅಗಸರ ಕೆಂಚೋಬನಹಳ್ಳಿ ಬಸಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಚೌಡಾಪುರ ಇವರು ನಮೂನೆ-21 ನೋಟಿಸನ್ನು ದಿನಾಂಕ 05-07-2012 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಸದರಿ ಗ್ರಾಮದ ಬೆಳ್ಳಡಿ ಈರಪ್ಪ ತಂದೆ ಲೇಟ್ ಸಂಗಪ್ಪ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 03/2012-13. ದಿನಾಂಕ 06-08-2012 ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 03-11-2015 ರಿಂದ 27-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಗೂ ಅವರ ಪರ ನ್ಯಾಯಾವಾದಿಗಳು ಮತ್ತು ತಕರಾರುದಾರರು ಹಾಜರಾಗಿರುತ್ತಾರೆ.. ಅರ್ಜಿದಾರರ ಪರ ನ್ಯಾಯಾವಾದಿಗಳು ಚೌಡಾಪುರ ಗ್ರಾಮದ ಸನಂ 837/1 ವಿಸ್ತೀರ್ಣ 1-53. ಎಕ್ರೆ ಜಮೀನನ್ನು ಅರ್ಜಿದಾರರ ಗಂಡನಾದ ಅಗಸರ ಕೆಂಚೋಬನಹಳ್ಳಿ ಬಸಪ್ಪ ತಂದೆ ತಿಪ್ಪಯ್ಯ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 28-12-1998 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರಾದ ಅಗಸರ ರಂಗಮ್ಮ ಗಂಡ ಲೇಟ್ ಅಗಸರ ಕೆಂಚೋಬನಹಳ್ಳಿ ಬಸಪ್ಪ ಇವರ ಹೆಸರಿನಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರು ಹಾಜರಾಗಿದ್ದು ಸದರಿ ವಿವಾದಿತ ಜಮೀನು ಈ ಮುಂಚೆ ನೊಂದಾಯಿತವಲ್ಲದ ಕ್ರಯ ಪತ್ರದ ಮೂಲಕ ಖರೀದಿಸಿದ್ದು ಸದರಿ ಜಮೀನು ನಮ್ಮ ಕಬ್ಜ ವಹಿವಾಟಿನಲ್ಲಿ

ನಾವೇ ಇರುವುದರಿಂದ ಸದರಿ ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ನಮ್ಮ ತಕರಾರು ಇರುವುದಾಗಿ ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ಮತ್ತು ತಕರಾರುದಾರರು ಹೇಳಿಕೆಗಳನ್ನು ಕೇಳಿ ಅರ್ಜಿದಾರರು ಈ ಪ್ರಕರಣದಲ್ಲಿ ಆಸಕ್ತಿ ತೋರದೇ ಇರುವುದರಿಂದ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಚೌಡಾಪುರ ಗ್ರಾಮದ ಸನಂ 837/1 ವಿಸ್ತೀರ್ಣ 1-53. ಎಕ್ರೆ ಜಮೀನಿನ ಅರ್ಜಿದಾರರು ಈ ಪ್ರಕರಣದಲ್ಲಿ ಆಸಕ್ತಿ ತೋರದೇ ಇರುವುದರಿಂದ ಅವರ ಅರ್ಜಿಯನ್ನು ತಿರಸ್ಕರಿಸಿ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸುತ್ತಾ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 27-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಚೇರಿ ಹೊಸಹಳ್ಳಿ
ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಅಗಸರ ರಂಗಮ್ಮ ಗಂಡ ಲೇಟ್ ಅಗಸರ ಕೆಂಚೋಬನಹಳ್ಳಿ ಬಸಪ್ಪ. ತ್ಯಾವಣಗಿ ಗ್ರಾಮ ಚನ್ನಗಿರಿ ತಾಲೂಕು ದಾವಣಗೆರೆ ಜಿಲ್ಲಾ ಇವರ ಪರ ವಕೀಲರಾದ ಎ.ಶರಣಪ್ಪ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಬೆಳ್ಳಡಿ ಈರಪ್ಪ ತಂದೆ ಲೇಟ್ ಸಂಗಪ್ಪ ಚೌಡಾಪುರ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.